## ಕರ್ನಾಟಕ ಸರ್ಕಾರದ ನಡವಳಿ

**ವಿಷಯ:– 6ನೇ ರಾಜ್ಯ ವೇತನ ಆಯೋಗದ ರಚನೆ ಕುರಿತು.**

ಓದಲಾಗಿದೆ: 1. ಸ.ಆ.ಸಂ. ಎಫ್‌ಡಿ 11 ಎಸ್‌ಆರ್‌ಪಿ 2003 ದಿ: 21–06–2005
2. ಸ.ಆ.ಸಂ. ಎಫ್‌ಡಿ 23 ಎಸ್‌ಆರ್‌ಪಿ 2011 ದಿ: 15–06–2011

**ಸರ್ಕಾರಿ ಆದೇಶ ಸಂಖ್ಯೆ: ಆಇ 22 ಎಸ್‌ಆರ್‌ಪಿ 2017,**
**ಬೆಂಗಳೂರು, ದಿನಾಂಕ 1ನೇ ಜೂನ್ 2017.**

ಮಾನ್ಯ ಮುಖ್ಯ ಮಂತ್ರಿಗಳು 2017–18ನೇ ಸಾಲಿನ ಆಯವ್ಯಯ ಭಾಷಣದಲ್ಲಿ ರಾಜ್ಯ ಸರ್ಕಾರಿ ನೌಕರರ ಬೇಡಿಕೆಗಳನ್ನು ಪರಿಶೀಲಿಸಲು ವೇತನ ಆಯೋಗವನ್ನು ರಚಿಸುವ ಸರ್ಕಾರದ ನಿರ್ಧಾರವನ್ನು ಘೋಷಿಸಿರುತ್ತಾರೆ.

2. ರಾಜ್ಯ ಸರ್ಕಾರಿ ನೌಕರರ ವೇತನ ಶ್ರೇಣಿಗಳನ್ನು ಪರಿಷ್ಕರಿಸಲು ಮತ್ತು ನೂತನ ವೇತನ ರಚನೆ ಇತ್ಯಾದಿಗಳನ್ನು ರೂಪಿಸಲು ಒಂದು ವೇತನ ಆಯೋಗವನ್ನು ರಚಿಸಲು ಸರ್ಕಾರವು ತೀರ್ಮಾನ ತೆಗೆದುಕೊಂಡಿರುತ್ತದೆ.

3. ಅದರಂತೆ, ಸರ್ಕಾರವು ಈ ಕೆಳಕಂಡ ಸದಸ್ಯರನ್ನು ಒಳಗೊಂಡ 6ನೇ ರಾಜ್ಯ ವೇತನ ಆಯೋಗವನ್ನು ರಚಿಸಲು ಹರ್ಷಿಸುತ್ತದೆ:–

| | | |
|---|---|---|
| (1) | ಶ್ರೀ ಎಂ.ಆರ್.ಶ್ರೀನಿವಾಸಮೂರ್ತಿ, ಭಾ.ಆ.ಸೇ. (ನಿವೃತ್ತ) | ಅಧ್ಯಕ್ಷರು |
| (2) | ಶ್ರೀ ಮೊಹಮ್ಮದ್ ಸನಾವುಲ್ಲಾ, ಭಾ.ಆ.ಸೇ. (ನಿವೃತ್ತ) | ಸದಸ್ಯರು |
| (3) | ಶ್ರೀ ಆರ್.ಎಸ್.ಪೋಂಡೆ, ನಿಯಂತ್ರಕರು (ನಿವೃತ್ತ) ರಾಜ್ಯ ಲೆಕ್ಕಪತ್ರ ಇಲಾಖೆ | ಸದಸ್ಯರು |
| (4) | ಶ್ರೀ ಎಂ.ಮಂಜುನಾಥ ನಾಯ್ಕ, ಭಾ.ಆ.ಸೇ. ಅಬಕಾರಿ ಆಯುಕ್ತರು | ಕಾರ್ಯದರ್ಶಿ |

4. ವೇತನ ಆಯೋಗದ ಪರಿಶೀಲನಾರ್ಹ ಅಂಶಗಳು ಈ ಕೆಳಕಂಡಂತಿವೆ:–

(ಎ) ರಾಜ್ಯ ಸರ್ಕಾರಿ ನೌಕರರ (ಯುಜಿಸಿ/ಎಐಸಿಟಿಇ/ಐಸಿಎಆರ್/ಎನ್‌ಜೆಪಿಸಿ ವೇತನ ಶ್ರೇಣಿ ಹೊಂದಿರುವವರನ್ನು ಹೊರತುಪಡಿಸಿ) ಅನುದಾನಿತ ಶಿಕ್ಷಣ ಸಂಸ್ಥೆಗಳು, ಸ್ಥಳೀಯ ಸಂಸ್ಥೆಗಳು, ವಿಶ್ವವಿದ್ಯಾನಿಲಯಗಳು ಮತ್ತು

ಕಾಲೇಜುಗಳ ಬೋಧಕೇತರ ಸಿಬ್ಬಂದಿಗಳಿಗೆ ಮರಣ ಹಾಗೂ ನಿವೃತ್ತಿ ಉಪದಾನ ಸೌಲಭ್ಯಗಳನ್ನೊಳಗೊಂಡಂತೆ ಲಭ್ಯವಿರುವ ಎಲ್ಲಾ ಕ್ರೋಢೀಕೃತ ಸೌಲಭ್ಯಗಳನ್ನು ಗಣನೆಗೆ ತೆಗೆದುಕೊಂಡು, ಈ ಸಿಬ್ಬಂದಿಗಳ ಪ್ರಸ್ತುತ ವೇತನ ರಚನೆಯನ್ನು ಪರಿಶೀಲಿಸುವುದು ಹಾಗೂ ಅಪೇಕ್ಷಣೀಯವಾದ ಹಾಗೂ ಕಾರ್ಯಸಾಧ್ಯವಿರುವ ನೂತನ ವೇತನ ರಚನೆಯನ್ನು ರೂಪಿಸುವುದು.

(ಬಿ) ರಾಜ್ಯ ಸರ್ಕಾರವು ಅಳವಡಿಸಿಕೊಂಡಿರುವ ತುಟ್ಟಿಭತ್ಯೆಯ ಸೂತ್ರವನ್ನು ಪರಿಶೀಲಿಸುವುದು ಹಾಗೂ ಅಪೇಕ್ಷಣೀಯವಾದ ಹಾಗೂ ಕಾರ್ಯ ಸಾಧ್ಯವಿರುವ ಬದಲಾವಣೆಗಳನ್ನು ನಿರ್ಣಯಿಸಿ ಸಲಹೆ ಮಾಡುವುದು.

(ಸಿ) ಮನೆ ಬಾಡಿಗೆ ಭತ್ಯೆ ಮತ್ತು ನಗರ ಪರಿಹಾರ ಭತ್ಯೆ, ವಿಶೇಷ ಭತ್ಯೆಗಳು ಇತ್ಯಾದಿ ಮತ್ತು ರಜೆ ಪ್ರಯಾಣ ರಿಯಾಯಿತಿ ಮತ್ತು ವೈದ್ಯಕೀಯ ಮರುಪಾವತಿ ಸೌಲಭ್ಯಗಳನ್ನೊಳಗೊಂಡಂತೆ ವಿವಿಧ ಭತ್ಯೆಗಳ ಪ್ರಮಾಣವನ್ನು ಪರಿಶೀಲಿಸುವುದು ಹಾಗೂ ಅಪೇಕ್ಷಣೀಯವಾದ ಹಾಗೂ ಕಾರ್ಯಸಾಧ್ಯವಿರುವ ಬದಲಾವಣೆಗಳನ್ನು ಸಲಹೆ ಮಾಡುವುದು.

(ಡಿ) ಪ್ರಸ್ತುತ ಜಾರಿಯಲ್ಲಿರುವ ನಿವೃತ್ತಿ ಸೌಲಭ್ಯಗಳನ್ನು ಪರಿಶೀಲಿಸುವುದು ಹಾಗೂ ಅಪೇಕ್ಷಣೀಯವಾದ ಹಾಗೂ ಕಾರ್ಯಸಾಧ್ಯವಿರುವ ಬದಲಾವಣೆಗಳನ್ನು ಮಾಡಲು ಸಲಹೆ ಮಾಡುವುದು.

(ಇ) ರಾಜ್ಯ ಸರ್ಕಾರದಿಂದ ವಹಿಸಲ್ಪಡುವ/ಸೂಚಿಸಬಹುದಾದ ಇತರೆ ವಿಷಯಗಳನ್ನು ಪರಿಶೀಲಿಸುವುದು.

5. ಆಯೋಗವು ತನ್ನ ಶಿಫಾರಸ್ಸುಗಳನ್ನು ಮಾಡುವಲ್ಲಿ, ರಾಜ್ಯದ ಸಂಪನ್ಮೂಲಗಳು ಹಾಗೂ ವಿವಿಧ ಅಭಿವೃದ್ಧಿ ಕಾರ್ಯಕ್ರಮಗಳು ಮತ್ತು ಯೋಜನೆಗಳ ಕುರಿತಾಗಿ ರಾಜ್ಯ ಸರ್ಕಾರದ ಹೊಣೆಗಳು, ಶಾಸನಬದ್ಧ ಹಾಗೂ ಕ್ರಮಬದ್ಧ ಕಾರ್ಯಗಳು, ಋಣಸೇವಾ ನಿರ್ವಹಣೆಗಳು ಮತ್ತು ಇತರೆ ಅಭಿವೃದ್ಧಿಯೇತರ ಅಗತ್ಯಗಳನ್ನು ಹಾಗೂ ವಿತ್ತೀಯ ಹೊಣೆಗಾರಿಕೆ ನಿರ್ವಹಣೆ ಅಧಿನಿಯಮ, 2002ರ ಅಧ್ಯಾದೇಶದ ಅವಕಾಶಗಳ ಪರಿಮಿತಿಯನ್ನು ಗಮನದಲ್ಲಿರಿಸಿಕೊಳ್ಳುವುದು.

6. ಆಯೋಗವು ತನ್ನದೇ ಆದ ಕಾರ್ಯವಿಧಾನಗಳನ್ನು ರೂಪಿಸಿಕೊಳ್ಳುವುದು ಹಾಗೂ ಪರಿಶೀಲನಾರ್ಹ ಅಂಶಗಳಿಗೆ ಅಗತ್ಯವೆನಿಸಿದ ಮಾಹಿತಿಗಳನ್ನು ವಿವಿಧ ಇಲಾಖೆಗಳಿಂದ ಪಡೆಯಬಹುದಾಗಿರುತ್ತದೆ.

7. ಸರ್ಕಾರದ ಎಲ್ಲಾ ಇಲಾಖೆಗಳು ಆಯೋಗವು ಅಪೇಕ್ಷಿಸುವ ಎಲ್ಲಾ ಮಾಹಿತಿ, ದಾಖಲೆ ಹಾಗೂ ಇನ್ನಿತರೆ ಸಹಕಾರವನ್ನು ಒದಗಿಸತಕ್ಕದ್ದು. ಎಲ್ಲಾ ಸೇವಾ ಸಂಘಟನೆಗಳು, ಸ್ಥಳೀಯ ಸಂಸ್ಥೆಗಳು, ಅನುದಾನಿತ ಸಂಸ್ಥೆಗಳು ಮತ್ತು ಇತರೆ ಸಂಬಂಧಪಟ್ಟವರು ಆಯೋಗಕ್ಕೆ ಅವುಗಳ ಸಂಪೂರ್ಣ ಸಹಕಾರ ಮತ್ತು ನೆರವನ್ನು ನೀಡುತ್ತವೆ ಎಂದು ಸರ್ಕಾರವು ಭಾವಿಸುತ್ತದೆ.

8. ವೇತನ ಆಯೋಗವು ತನ್ನ ವರದಿಯನ್ನು ನಾಲ್ಕು ತಿಂಗಳೊಳಗೆ ಸಲ್ಲಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಸಿ.ಎಚ್.ಶಿವಕುಮಾರ್)
ಸರ್ಕಾರದ ಉಪ ಕಾರ್ಯದರ್ಶಿ
ಆರ್ಥಿಕ ಇಲಾಖೆ (ಸೇವೆಗಳು-2)

ಸಂಕಲನಕಾರರು, ಕರ್ನಾಟಕ ಗೆಜೆಟ್, ಮುಂದಿನ ಪ್ರಕಟಣೆಯಲ್ಲಿ ಪ್ರಕಟಿಸುವುದಕ್ಕಾಗಿ ಹಾಗೂ 100 ಪ್ರತಿಗಳನ್ನು ಆರ್ಥಿಕ ಇಲಾಖೆಗೆ ಸರಬರಾಜು ಮಾಡಲು.

**ಇವರಿಗೆ:**

1. ಸರ್ಕಾರದ ಮುಖ್ಯ ಕಾರ್ಯದರ್ಶಿ/ಅಪರ ಮುಖ್ಯ ಕಾರ್ಯದರ್ಶಿಗಳು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
3. ಪ್ರಧಾನ ಮಹಾಲೇಖಪಾಲರು (G&SSA), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, (ಪಿ.ಬಿ. ನಂ.5398) ಬೆಂಗಳೂರು.
4. ಪ್ರಧಾನ ಮಹಾಲೇಖಪಾಲರು (E&RSA), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, (ಪಿ.ಬಿ. ನಂ.5398) ಬೆಂಗಳೂರು.
5. ಪ್ರಧಾನ ಮಹಾಲೇಖಪಾಲರು (ಲೆಕ್ಕಗಳು ಮತ್ತು ಹಕ್ಕುಗಳು), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ, (ಪಿ.ಬಿ. ನಂ.5329) ಬೆಂಗಳೂರು.
6. ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
7. ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬಹುಮಹಡಿ ಕಟ್ಟಡ, ಬೆಂಗಳೂರು.
8. ರಿಜಿಸ್ಟ್ರಾರ್, ಕರ್ನಾಟಕ ಆಡಳಿತ ನ್ಯಾಯಮಂಡಳಿ, ಕಂದಾಯ ಭವನ, ಬೆಂಗಳೂರು.
9. ಕಾರ್ಯದರ್ಶಿ, ಕರ್ನಾಟಕ ಲೋಕ ಸೇವಾ ಆಯೋಗ, ಬೆಂಗಳೂರು.
10. ಪ್ರಾದೇಶಿಕ ಆಯುಕ್ತರು, ಬೆಂಗಳೂರು/ಮೈಸೂರು/ಬೆಳಗಾವಿ/ಗುಲ್ಬರ್ಗಾ
11. ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ/ವಿಧಾನ ಪರಿಷತ್ತು, ವಿಧಾನಸೌಧ, ಬೆಂಗಳೂರು.
12. ಕಾರ್ಯದರ್ಶಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ವಿಧಾನಸೌಧ, ಬೆಂಗಳೂರು.
13. ಕರ್ನಾಟಕ ರಾಜ್ಯದ ಎಲ್ಲಾ ವಿಶ್ವವಿದ್ಯಾನಿಲಯಗಳ ಉಪ ಕುಲಪತಿಗಳು/ರಿಜಿಸ್ಟ್ರಾರ್‌ಗಳು.
14. ಎಲ್ಲಾ ಜಿಲ್ಲೆಗಳ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು.
15. ಇಲಾಖಾ ಮುಖ್ಯಾಧಿಕಾರಿಗಳು/ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು.
16. ಎಲ್ಲಾ ಜಿಲ್ಲೆಗಳ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
17. ಖಜಾನೆ ಅಧಿಕಾರಿ, ರಾಜ್ಯ ಹುಜೂರು ಖಜಾನೆ/ಜಿಲ್ಲಾ ಖಜಾನೆಗಳು.

18. ನಿರ್ದೇಶಕರು, ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ, ವಿಕಾಸ ಸೌಧ, ಬೆಂಗಳೂರು.
19. ಪ್ರಾಜೆಕ್ಟ್ ಆಫೀಸರ್, ಹೆಚ್.ಆರ್.ಎಂ.ಎಸ್., ಕೊಠಡಿ ಸಂಖ್ಯೆ:145'A', ಬಹುಮಹಡಿಗಳ ಕಟ್ಟಡ, ಬೆಂಗಳೂರು.
20. ಕರ್ನಾಟಕ ಸರ್ಕಾರ ಸಚಿವಾಲಯದ ಎಲ್ಲಾ ಶಾಖೆಗಳು.
21. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಉದ್ಯಾನವನ, ಬೆಂಗಳೂರು.
22. ಇತರೆ ಎಲ್ಲಾ ನೌಕರರ ನೋಂದಾಯಿತ ಸೇವಾ ಸಂಘಟನೆಗಳು.
23. ಅಧ್ಯಕ್ಷರು, ಕರ್ನಾಟಕ ರಾಜ್ಯ ನಿವೃತ್ತ ನೌಕರರ ಸಂಘ(ರಿ), ಕಬ್ಬನ್ ಉದ್ಯಾನವನ, ಬೆಂಗಳೂರು.
24. ಕರ್ನಾಟಕ ಸರ್ಕಾರ ಸಚಿವಾಲಯದ ಗ್ರಂಥಾಲಯ/ವಿಧಾನ ಮಂಡಲದ ಗ್ರಂಥಾಲಯ.
25. ವಾರಪತ್ರ/ಶಾಖೆಯ ರಕ್ಷಾ ಕಡತ.

**ಕರ್ನಾಟಕ ಸರ್ಕಾರದ ಆರ್ಥಿಕ ಇಲಾಖೆಯ ಅಧಿಕೃತ ಅಂತರ್ಜಾಲತಾಣ www.finance.kar.nic.in ವೀಕ್ಷಿಸಿ.**

# PROCEEDINGS OF GOVERNMENT OF KARNATAKA

Subject: Constitution of 6th State Pay Commission – Orders reg.

Read: 1. G.O. No.FD 11 SRP 2003 dated: 21-06-2005
2. G.O. No.FD 23 SRP 2011 dated: 15-06-2011.

## GOVERNMENT ORDER NO.FD 22 SRP 2017
## BANGALORE, DATED 01ST JUNE 2017

The Hon'ble Chief Minister in the Budget Speech 2017-18 has announced Government's decision to constitute a Pay Commission to examine the request of the State Government Employees.

2. The State Government have taken a decision to constitute a Pay Commission to go in to the revision of pay scales of State Government Employees and to evolve a new pay structure etc.

3. Accordingly, Government are now pleased to constitute 6th State Pay Commission consisting of the following Members:-

| | |
|---|---|
| (1) Sri M.R.Sreenivasa Murthy, IAS (Retd.) | Chairman |
| (2) Sri Md. Sanaullah, IAS (Retd.) | Member |
| (3) Sri R.S.Phonde, Retired Controller, State Accounts Department | Member |
| (4) Sri M.Manjunath Naik, IAS Commissioner of Excise | Secretary |

4. The Terms of Reference of the Pay Commission will be as follows:-

(a) To examine the present pay structure of employees of the State Government (excluding those who are on the UGC/AICTE/ICAR/NJPC scales of pay), Aided Educational Institutions, Local Bodies and Non-teaching Staff of the Universities taking into account the total packet of benefits including death-cum-retirement benefits available to the employees and to recommend new pay structure which may be feasible;

(b) To examine and determine the Dearness Allowance formula adopted by the State Government and to suggest changes which may be feasible;

(c) To examine the quantum of various allowances including House Rent allowance, City Compensatory Allowance, etc. and Leave Travel Concession and Medical Attendance facilities and to suggest changes which may be feasible;

(d) To examine the existing pattern of pension benefits and to suggest changes which may be feasible;

(e) To examine such other matters as may be entrusted/referred by the State Government.

5. In making its recommendations, the Pay Commission should keep in view the resources of the State Government and Government's commitments for various development programmes and schemes, statutory and regulatory functions, debt-servicing obligations and other non-development requirements within the overall mandate of the Fiscal Responsibility Act, 2002.

6. The Pay Commission should devise its own procedure, and may call for such information from various Departments as found necessary for its terms of reference.

7. All the Government departments shall furnish such information and documents and other assistance, as may be required by the Pay Commission. Government trust that all the service Associations, Local Bodies, Aided Institutions and other concerned will extend to the Pay Commission their fullest co-operation and assistance.

8. The Pay Commission shall submit its report within four months.

**By Order and in the name of the**
**Governor of Karnataka,**

**(C.H.SHIVAKUMAR)**
**Deputy Secretary to Government**
**Finance Department (Services-2)**
BHR 1/6/17

The Compiler, Karnataka Gazette for publication in the next issue of the Gazette and to supply 100 copies to Finance Department.

**To**

1. The Chief Secretary/Additional Chief Secretaries to Government.
2. The Principal Accountant General (General & Social Sector Audit), Karnataka, New Building, Audit Bhavan (P.B.No. 5398), Bangalore.
3. The Principal Accountant General (Economic and Revenue Sector Audit), Karnataka, New Building, Audit Bhavan (P.B.No. 5398), Bangalore.
4. The Principal Accountant General (Accounts & Entitlement), Karnataka, Park House Road (P.B.No.5329), Bangalore.
5. The Principal Secretaries/Secretaries to Government.
6. The Registrar General, High Court of Karnataka, Bangalore.
7. The Registrar, Karnataka Lokayukta, M.S.Building, Bangalore.
8. The Registrar, Karnataka Administrative Tribunal, Kandaya Bhawan, Bangalore.

9. The Regional Commissioners, Bangalore / Mysore / Belgaum / Gulbarga.
10. The Secretary, Karnataka Public Service Commission, Bangalore.
11. The Secretary, Karnataka Legislative Assembly/Legislative Council, Vidhana Soudha, Bangalore.
12. The Secretary, Kannada Development Authority, Vidhana Soudha, Bangalore.
13. Vice Chancellors / Registrars of All Universities in Karnataka
14. Principal District and Session Judges of All Districts.
15. The Heads of Departments.
16. The Deputy Commissioners of All Districts.
17. The Chief Executive Officers of Zilla Panchayaths (All Districts).
18. The Treasury Officer, State Huzur Treasury/District Treasuries.
19. The Director, Karnataka State Archives Department, Vikasa Soudha, Bangalore.
20. The Project Officer, HRMS, Room No.145 'A', M.S.Building, Bangalore.
21. The Senior Research Officer, Pay Research Unit, Department of Expenditure, Ministry of Finance, Government of India, New Delhi.
22. The President, Karnataka State Government Employees Association, Bangalore / all other recognized Employees Service Associations.
23. The President, Karnataka State Government Pensioners' Association(R), Cubbon Park, Bangalore
24. Karnataka Government Secretariat Library/Legislature Library.
25. Weekly Gazette/Section Guard File.

**Visit, the Official Website of Finance Department, GOK : www.finance.kar.nic.in**